# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 743

ಸದಸ್ಯರ ಹೆಸರು : ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 22.02.2023

ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಭೂಪರಿವರ್ತನೆಗೆ ಇರುವ ಕಾನೂನುಗಳು ಹಾಗೂ ಇರುವ ನಿಯಮಗಳೇನು; ಎಷ್ಟು ಎಕರೆಯವರೆಗೂ ಭೂಪರಿವರ್ತನೆ ಮಾಡಲು ನಿಯಮಗಳಲ್ಲಿ ಅವಕಾಶವಿದೆ; (ಮಾಹಿತಿ ನೀಡುವುದು) | ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95 ಮತ್ತು 96ರಡಿ ಹಾಗೂ ಕರ್ನಾಟಕ ಭೂ ಕಂದಾಯ ನಿಯಮ, 1966ರ ನಿಯಮ 107 ಹಾಗೂ 107ಎ ಗಳನ್ವಯ ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕಾಗಿ ಭೂ ಪರಿವರ್ತನೆ ಮಾಡಲು ಅವಕಾಶ ಕಲ್ಪಿಸಲಾಗಿದೆ.<br><br>ಭೂ ಪರಿವರ್ತನೆ ಮಾಡಲು ಯಾವುದೇ ಗರಿಷ್ಠ ಮಿತಿಯನ್ನು ನಿಗದಿಪಡಿಸಿರುವುದಿಲ್ಲ. |
| (ಆ) | ಕೊಡಗು ಜಿಲ್ಲೆಯಲ್ಲಿ ಕಳೆದ 15 ವರ್ಷಗಳಲ್ಲಿ ಎಷ್ಟು ಎಕರೆ ಜಾಗವನ್ನು ಕೃಷಿಯೇತರ ಕಾರಣಗಳಿಗಾಗಿ ಭೂಪರಿವರ್ತನೆ ಮಾಡಲಾಗಿದೆ; ಇದರಿಂದಾಗಿ ಅಲ್ಲಿನ ಜನತೆ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೊಡಗು ಜಿಲ್ಲೆಯಲ್ಲಿ ಕಳೆದ 15 ವರ್ಷಗಳಲ್ಲಿ ಅಂದಾಜು 3117.09 ಎಕರೆ ಜಾಗವನ್ನು ಕೃಷಿಯೇತರ ಕಾರಣಗಳಿಗಾಗಿ ಭೂ ಪರಿವರ್ತನೆ ಮಾಡಲಾಗಿದೆ.<br><br>ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರಡಿ ಇರುವ ಅವಕಾಶದಂತೆ ಈ ಹಿಂದಿನಿಂದಲೂ ಕೃಷಿ ಜಮೀನುಗಳನ್ನು ಕೃಷಿಯೇತರ ಉದ್ದೇಶಗಳಿಗೆ ಭೂ ಪರಿವರ್ತನೆ ಮಾಡಲಾಗುತ್ತಿದೆ. |
| (ಇ) | ಮೈಸೂರು, ಮಂಡ್ಯ ರಾಮನಗರ ಬೆಂಗಳೂರು ಸೇರಿದಂತೆ ಇನ್ನೂ ಹಲವು ಜಿಲ್ಲೆಗಳ ಜನತೆಗೆ ಕೊಡಗಿನ ಕಾವೇರಿಯಿಂದಲೇ ನೀರು ಪೂರೈಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ; | ಬಂದಿದೆ. |
| (ಈ) | ಈ ರೀತಿ ಲೆಕ್ಕವಿಲ್ಲದಷ್ಟು ಜಮೀನುಗಳನ್ನು ಭೂಪರಿವರ್ತನೆ ಮಾಡಲು ಅವಕಾಶಗಳನ್ನು ಕಲ್ಪಿಸಿ ಈಗಾಗಲೇ ನಿರಂತರವಾಗಿ ಸುರಿಯುವ ಮಳೆಯ ಪ್ರಮಾಣದಿಂದ; ಅಂತರ್ಜಲ ಕುಸಿತದಿಂದಾಗಿ ನೀರಿನ ಕೊರತೆ ಅನುಭವಿಸುತ್ತಿರುವುದು ಈ ಭೂಪರಿವರ್ತನೆಗೆ ಕಾರಣ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೊಡಗು ಜಿಲ್ಲೆಯಲ್ಲಿ 2018ರಲ್ಲಿ ಪ್ರಕೃತಿ ವಿಕೋಪದ ಹಿನ್ನೆಲೆಯಲ್ಲಿ ಕೃಷಿ ಜಮೀನುಗಳನ್ನು ಕೃಷಿಯೇತರ ಉದ್ದೇಶಗಳಿಗೆ ಭೂ ಪರಿವರ್ತಿಸುವುದನ್ನು ಸ್ಥಗಿತಗೊಳಿಸಲಾಗಿತ್ತು. ತದನಂತರ ವಾಸದ ಉದ್ದೇಶಕ್ಕಾಗಿ ಮನೆ ನಿರ್ಮಿಸುವವರಿಗೆ 15-20 ಸೆಂಟ್ ವಿಸ್ತೀರ್ಣದ ಜಮೀನನ್ನು ಸ್ಥಳ ಪರಿಶೀಲನೆ ಮಾಡಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95ರಡಿ ಆದೇಶ ನೀಡಲು ದಿನಾಂಕ: 08.05.2019ರಲ್ಲಿ ಸರ್ಕಾರದ ಅನುಮತಿ ನೀಡಲಾಗಿತ್ತು.<br><br>ಮುಂದುವರೆದು, ವಾಣಿಜ್ಯ ಕಟ್ಟಡಗಳು, ಶಾಲೆಗಳು, ರೆಸಾರ್ಟ್‌ಗಳು, ಪೆಟ್ರೋಲ್ ಬಂಕ್‌ಗಳು ಅಥವಾ ಖಾಸಗಿ ಉದ್ಯಮ ಪ್ರಾರಂಭಿಸಲು ತೊಡಕು ಉಂಟಾಗಿರುವ ಸಮಸ್ಯೆಗಳ ಬಗ್ಗೆ, ಸರ್ಕಾರದ ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಸರ್ಕಾರದ ಸಂಖ್ಯೆ: ಆರ್‌ಡಿ 24 ಎಲ್‌ಜಿಬಿ 2018, |

<table>
<tr><td></td><td></td><td>ದಿನಾಂಕ:04.06.2020ರ ಆದೇಶದಲ್ಲಿ ಕೊಡಗು ಜಿಲ್ಲೆಯಲ್ಲಿ ಭಾರತೀಯ ಭೂ ವೈಜ್ಞಾನಿಕ ಸರ್ವೇಕ್ಷಣಾ ಇಲಾಖೆಯ ಅಧ್ಯಯನದಲ್ಲಿ ಗುರುತಿಸಿರುವ 10% ತೀವ್ರ ಅಪಾಯಕಾರಿ ಭೂ ಭಾಗಗಳು ಮತ್ತು 2018 ಮತ್ತು 2019ನೇ ಸಾಲಿನಲ್ಲಿ ಭೂ ಕುಸಿತಕ್ಕೆ ಒಳಗಾದ ಪ್ರದೇಶ, ಹಳ್ಳ-ಕೊಳ್ಳ, ನದಿ ಪಾತ್ರದ ಪ್ರದೇಶಗಳನ್ನು ಹೊರತುಪಡಿಸಿ, ಇನ್ನುಳಿದ ಪ್ರದೇಶಗಳಲ್ಲಿ ಕೃಷಿ ಜಮೀನುಗಳನ್ನು ಕೃಷಿಯೇತರ ಉದ್ದೇಶಗಳಿಗಾಗಿ ಅಂದರೆ ವಸತಿ ಕಟ್ಟಡಗಳು, ವಾಣಿಜ್ಯ ಕಟ್ಟಡಗಳು, ಶಾಲೆಗಳು, ರೆಸಾರ್ಟ್‌ಗಳು, ಪೆಟ್ರೋಲ್ ಬಂಕ್‌ಗಳು ಅಥವಾ ಖಾಸಗಿ ಉದ್ಯಮಗಳಿಗಾಗಿ ಭೂ ಪರಿವರ್ತಿಸಲು ತಾಂತ್ರಿಕ ಸಮಿತಿಯ ನಿರಾಕ್ಷೇಪಣಾ ಪತ್ರದ ಮೇಲೆ ಸಂಬಂಧಪಟ್ಟ ಗ್ರಾಮ ಪಂಚಾಯತಿ ಹಾಗೂ ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳಿಂದ ನಿಯಮಾನುಸಾರ ಅನುಮತಿ ಪಡೆದು ಕಟ್ಟಡಗಳನ್ನು ನಿರ್ಮಿಸಲು ಸೂಚಿಸಲಾಗಿದೆ.<br><br>(ತಾಂತ್ರಿಕ ಸಮಿತಿಯು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದು ಈ ಸಮಿತಿಯಲ್ಲಿ ಹಿರಿಯ ಭೂ ವಿಜ್ಞಾನಿ / ಉಪ ನಿರ್ದೇಶಕರು, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಉಪ ನಿರ್ದೇಶಕರು, ಭೂ ದಾಖಲೆಗಳು, ಸಹಾಯಕ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಅಧಿಕಾರಿಗಳು ಸದಸ್ಯರಾಗಿದ್ದು, ಸಂಬಂಧಪಟ್ಟ ತಹಶೀಲ್ದಾರರು ಸದಸ್ಯ ಕಾರ್ಯದರ್ಶಿ ಯಾಗಿರುತ್ತಾರೆ)</td></tr>
<tr><td>(ಉ)</td><td>ಹವಾಮಾನ ವೈಪರೀತ್ಯ ಆಗುತ್ತಿರುವುದನ್ನು ಸರ್ಕಾರ ಮನಗಂಡಿದೆಯೇ; ಮಳೆಯ ಪ್ರಮಾಣವು ಕಳೆದ 05 ವರ್ಷಗಳಲ್ಲಿ ಯಾವ ಪ್ರಮಾಣದಲ್ಲಿದೆ; (ಮಾಹಿತಿ ನೀಡುವುದು)</td><td>ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಕಳೆದ 5 ವರ್ಷಗಳ ಮಳೆ ವಿವರಗಳನ್ನು ಈ ಕೆಳಕಂಡಂತೆ ನೀಡಲಾಗಿದೆ;-
<table>
<tr><th>ಕ್ರ. ಸಂ</th><th>ವರ್ಷ</th><th>ಮಳೆ ಪ್ರಮಾಣ (ಮಿ.ಮೀ)</th></tr>
<tr><td>1</td><td>2018-19</td><td>4052.21</td></tr>
<tr><td>2</td><td>2019-20</td><td>3185.7</td></tr>
<tr><td>3</td><td>2020-21</td><td>2889.1</td></tr>
<tr><td>4</td><td>2021-22</td><td>2656.1</td></tr>
<tr><td>5</td><td>2022-23</td><td>3035.7</td></tr>
</table></td></tr>
<tr><td>(ಊ)</td><td>ಮುಂದಿನ ದಿನಗಳಲ್ಲಿ ರಾಜ್ಯದ ಜನತೆಗೆ ನೀರಿನ ಅಭಾವ ತಪ್ಪಿಸುವಂತಾಗಲು ಕೊಡಗು ಜಿಲ್ಲೆಗೆ ಪ್ರತ್ಯೇಕವಾದ ಭೂಪರಿವರ್ತನೆಯ ಕಾನೂನನ್ನು ಜಾರಿಗೊಳಿಸಲು ಸರ್ಕಾರ ಮುಂದಾಗುವುದೇ; ಹಾಗಿದ್ದಲ್ಲಿ, ಭೂಪರಿವರ್ತನೆಗೆ ಕಡಿವಾಣ ಹಾಕಲು ಸರ್ಕಾರ ತೆಗೆದುಕೊಳ್ಳಲು ಮುಂದಾಗಿರುವ ಕ್ರಮಗಳೇನು;</td><td>ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಪ್ರತ್ಯೇಕವಾದ ಕಾನೂನು ರೂಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.</td></tr>
</table>

(ಕಡತ ಸಂಖ್ಯೆ:ಕಂಇ 06 ಎಲ್‌ಜಿಓ 2023)

(ಆರ್.ಅಶೋಕ)
ಕಂದಾಯ ಸಚಿವರು